[redacted]

ಬೆಳಗಾವಿ.ಬೆಳಗಾವಿ ಲೋಕಸಭೆಗೆ ಮೃಣಾಲ್ ಗೆ ಟಿಕೆಟ್ ಫೈನಲ್ ವಿಚಾರ ಬೆಳಗಾವಿಯಲ್ಲಿ ಮೃಣಾಲ್ ಹೆಬ್ಬಾಳ್ಕರ್ ಹೇಳಿಕೆ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಸುಮಾರು ವರ್ಷಗಳಿಂದ ಓಡಾಡ್ತಿದ್ದೇನೆ.ಪಕ್ಷ ಸಂಘಟನೆಗಾಗಿ ಹಳ್ಳಿ ಹಳ್ಳಿಗೆ ಭೇಟಿ ಕೊಡ್ತಿದ್ದೇನೆ

ಈಗ ಒಳ್ಳೆಯ ವಾತಾವರಣ ಇದೆ ಎಂದ ಮೃಣಾಲ್ ಹೆಬ್ಬಾಳ್ಕರ ಟಿಕೆಟ್ ವಿಚಾರದಲ್ಲಿ ನಮ್ಮ ಪಕ್ಷ ಅಥವಾ ವಿರೋಧ ಪಕ್ಷ ಅಧಿಕೃತ ನಿರ್ಧಾರ ಬರುವವರೆಗೂ ಏನೂ ಹೇಳಲ್ಲ ಹೈಕಮಾಂಡ್ ಟಿಕೆಟ್ ನೀಡಿದ್ರೇ ಎಲ್ಲ ನಾಯಕರನ್ನ ವಿಶ್ವಾಸಕ್ಕೆ ತೆಗೆದುಕೊಂಡು ಜನರ ಬಳಿ ಹೋಗ್ತೇನಿ. ನಾವು ಮಾಡಿದ ಕೆಲಸ, ಸತೀಶ್ ಜಾರಕಿಹೊಳಿ, ಸರ್ಕಾರ ಮಾಡಿದ ಕೆಲಸ ಎಲ್ಲವನ್ನೂ ಇಟ್ಟುಕೊಂಡು ಜನರ ಬಳಿ ವೋಟ್ ಕೇಳ್ತೆವಿ ಎಂದ ಮೃಣಾಲ್

ಪಿಯುಸಿ;1028 ವಿದ್ಯಾರ್ಥಿಗಳು ಹಾಜರು

ದಾವಣಗೆರೆ,ಮಾ.21: ದ್ವಿತೀಯ ಪಿ.ಯು.ಸಿ.ವಾರ್ಷಿಕ ಪರೀಕ್ಷೆ ನಡೆಯುತ್ತಿದ್ದು ಮಾರ್ಚ್ 21 ರಂದು ನಡೆದ ಉರ್ದು, ಸಂಸ್ಕೃತ ಪರೀಕ್ಷೆಗೆ 1028 ವಿದ್ಯಾರ್ಥಿಗಳು ಹಾಜರಾಗಿದ್ದರು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ತಿಳಿಸಿದ್ದಾರೆ.

ಉರ್ದು ವಿಷಯವನ್ನು 572 ವಿದ್ಯಾರ್ಥಿಗಳು ತೆಗೆದುಕೊಂಡಿದ್ದು 546 ಹಾಜರಾಗಿ 26 ಗೈರು ಹಾಜರಾಗಿದ್ದರು. ಸಂಸ್ಕೃತ ವಿಷಯವನ್ನು 484 ವಿದ್ಯಾರ್ಥಿಗಳು ತೆಗೆದುಕೊಂಡಿದ್ದು 2 ವಿದ್ಯಾರ್ಥಿಗಳು ಗೈರು ಹಾಜರಾಗಿ 482 ವಿದ್ಯಾರ್ಥಿಗಳು ಹಾಜರಾಗಿರುವರು.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಕರಪತ್ರ, ಪೋಸ್ಟರ ಮುದ್ರಣ ಮಾಲೀಕರ ಗಮನಕ್ಕೆ

ಬೆಳಗಾವಿ,ಮಾ-: ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಈಗಾಗಲೇ ಚುನಾವಣಾ ಆಯೋಗದಿಂದ ವೇಳಾಪಟ್ಟಿ ಪ್ರಕಟಿಸಲಾಗಿದೆ. ಚುನಾವಣಾ ಆಯೋಗದ ಮಾರ್ಗಸೂಚಿಯನ್ವಯ ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯ ಪ್ರಿಂಟಿಂಗ್ ಪ್ರೆಸ್ ಮಾಲಿಕರು ಚುನಾವಣಾ ಪ್ರಚಾರದ ಸಾಮಗ್ರಿಗಳ ಮುದ್ರಣ ಕಾರ್ಯ ಮಾಡಬೇಕು. ತಪ್ಪಿದ್ದಲ್ಲಿ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಯಾದ ರಾಹುಲ ಶಿಂಧೆ ಅವರು ಆದೇಶ ಹೊರಡಿಸಿರುತ್ತಾರೆ.ಕರಪತ್ರ, ಬಿತ್ತಿಪತ್ರ, ಮುದ್ರಣ ಮಾಡುವಾಗ ಅವುಗಳಲ್ಲಿ ಪ್ರಿಂಟಿಂಗ್ ಪ್ರೆಸ್ ಹೆಸರು ಹಾಗೂ ಮುದ್ರಿತ ಪ್ರತಿಗಳ ಸಂಖ್ಯೆ ನಮೂದಿಸುವುದು. ಮುದ್ರಕರು ಆಯೋಗವು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿ ಪ್ರಕಾಶಕರಿಂದ ವಿವರಗಳನ್ನು ಪಡೆದು ಮುದ್ರಣ ಕಾರ್ಯ ಕೈಗೊಳ್ಳಬೇಕು. ಮುದ್ರಣವು ಉದ್ದೇಶಿತ ಪ್ರಕಾಶಕರಿಂದ ಸಹಿ ಮಾಡಲ್ಪಟ್ಟ ಮತ್ತು ಅವನ ವೈಯಕ್ತಿಕವಾಗಿ ತಿಳಿದಿರುವ ಇಬ್ಬರು ವ್ಯಕ್ತಿಗಳಿಂದ ದೃಢೀಕರಿಸಲ್ಪಟ್ಟ ಅವನ ಗುರುತಿನ ಘೋಷಣೆಯನ್ನು ದ್ವಿ-ಪ್ರತಿಯಲ್ಲಿ ಪಡೆಯಬೇಕು. ಮುದ್ರಣ ಘೋಷಣೆಯ ಒಂದು ಪ್ರತಿಯನ್ನು ಮತ್ತು ದಾಖಲೆಯ ಒಂದು ಪ್ರತಿಯನ್ನು ಮುದ್ರಿಸಿರುವ ಜಿಲ್ಲಾ ಮ್ಯಾಜಿಸ್ಟ್ರೇಟ ಇವರಿಗೆ ಸಲ್ಲಿಸಬೇಕು.ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ರಾಜಕೀಯ ಮತ್ತು ಕೋಮುಗಳಭೆ, ದ್ವೇಷ ಭಾವನೆ ಕೆರಳಿಸುವಂತಹ ಬ್ಯಾನರ, ಹೋಲ್ಡಿಂಗ್ಸಳಾಗಲಿ ಮತ್ತು ಕರಪತ್ರಗಳನ್ನಾಗಲಿ ಮುದ್ರಿಸುವಂತಿಲ್ಲ. ಚುನಾವಣಾ ಆಯೋಗ ನೀಡಿರುವ ಮಾರ್ಗಸೂಚಿಗಳು ಉಲ್ಲಂಘನೆಯಾದಲ್ಲಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಆದೇಶದಲ್ಲಿ ತಿಳಿಸಿರುತ್ತಾರೆ.

ವೀರಾಂಜನೇಯ ಅವರಿಗೆ ಪಿಎಚ್‌ಡಿ ಪದವಿ

ಬಳ್ಳಾರಿ,ಮಾ-:ಬಳ್ಳಾರಿ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ವಿಭಾಗದ ವೀರಾಂಜನೇಯ.ಕೆ ಅವರಿಗೆ ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ಘೋಷಿಸಿದೆ.ವೀರಾಂಜನೇಯ.ಕೆ ಇವರು ಬಳ್ಳಾರಿ ಶ್ರೀ ಕೃಷ್ಣದೇವ ರಾಯ ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಸಹ ಪ್ರಾಧ್ಯಾಪಕ ಡಾ.ತಿಪ್ಪೇಸ್ವಾಮಿ ಅವರ ಮಾರ್ಗದರ್ಶನದಲ್ಲಿ "ಹಿಸ್ಟಾರಿಕಲ್ ಪ್ರಾಸ್ಪೆಕ್ಟಿವ್ ಆಫ್ ಜ್ಯುವೆಲರಿ ಸಿಸ್ಟಮ್ ಇನ್ ಕರ್ನಾಟಕ" (ಎ ಸ್ಪೆಶಲ್ ರೆಫರೆನ್ಸ್ ಟು ಬಳ್ಳಾರಿ ಅಂಡ್ ಕೊಪ್ಪಳ ರೀಜನ್ಸ್) ಎಂಬ ಶೀರ್ಷಿಕೆಯಡಿಯಲ್ಲಿ ಸಂಶೋಧನೆ ಕೈಗೊಂಡು ಸಲ್ಲಿಸಿದ ಮಹಾಪ್ರಬಂಧಕ್ಕೆ ವಿಶ್ವವಿದ್ಯಾಲಯವು ಡಾಕ್ಟರ್ ಆಫ್ ಫಿಲಾಸಫಿ ಪದವಿಯನ್ನು ಘೋಷಿಸಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

ಅರುಣಾಚಲ ಪ್ರದೇಶದಲ್ಲಿ ಭೂಕಂಪ

ಮಾ.21- ಅರುಣಾಚಲ ಪ್ರದೇಶದಲ್ಲಿ ಇಂದು ಮುಂಜಾನೆ ಎರಡು ಭೂಕಂಪಗಳು ವರದಿಯಾಗಿವೆ ಎಂದು ಭೂಕಂಪಶಾಸದ ರಾಷ್ಟ್ರೀಯ ಕೇಂದ್ರ ತಿಳಿಸಿದೆ.3.7 ರ ತೀವ್ರತೆಯೊಂದಿಗೆ ಮೊದಲ ಭೂಕಂಪವು 01:49 ಕ್ಕೆ ಸಂಭವಿಸಿದೆ.ಭೂಕಂಪದ ಕೇಂದ್ರವು ಅಕ್ಷಾಂಶ 27.38 ಮತ್ತು ರೇಖಾಂಶ 92.77 ರಲ್ಲಿ 10 ಕಿಲೋಮೀಟರ್ ಆಳದಲ್ಲಿದೆ. ಅರುಣಾಚಲ ಪ್ರದೇಶದ ಪಶ್ಚಿಮ ಕಮೆಂಗ್ ನಲ್ಲಿ ಭೂಕಂಪನ ಕೇಂದ್ರೀಕೃತವಾಗಿತ್ತು. ಮೊದಲ ಕಂಪನವಾದ ಕೇವಲ ಎರಡು ಗಂಟೆಗಳ ನಂತರ ಮತ್ತೆ 03:40 ಕ್ಕೆ ಎರಡನೇ ಭೂಕಂಪನ ವರದಿಯಾಗಿದೆ.ಈ ಭೂಕಂಪವು 3.4 ರ ತೀವ್ರತೆಯನ್ನು ಹೊಂದಿದ್ದು, ಅರುಣಾಚಲ ಪ್ರದೇಶದ ಪೂರ್ವ ಕಮೆಂಗ್ನಲ್ಲಿ ಕೇಂದ್ರೀಕೃತವಾಗಿತ್ತು. ಭೂಕಂಪದ ಕೇಂದ್ರವು 5 ಕಿಲೋಮೀಟರ್ ಆಳದೊಂದಿಗೆ ಅಕ್ಷಾಂಶ 27.46 ಮತ್ತು ರೇಖಾಂಶ 92.82 ನಲ್ಲಿತ್ತು ಎಂದು ಭೂಕಂಪನಶಾಸ್ತ್ರದ ರಾಷ್ಟ್ರೀಯ ಕೇಂದ್ರ ಹೇಳಿದೆ.

ಮಲ್ಲಿಕಾರ್ಜುನ ಖರ್ಗೆ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರಿಗೆ ಕಲಬುರಗಿ ಕ್ಷೇತ್ರದ ಕಾಂಗ್ರೆಸ್ ಟಿಕೆಟ್

ದಿನೇದಿನೇ ಲೋಕಸಭಾ ಚುನಾವಣೆ ರಂಗೇರುತ್ತಿದೆ. ಮುಂಬರುವ 2024ರ ಲೋಕಸಭೆ ಚುನಾವಣೆಯಲ್ಲಿ ಕೈ ಪಕ್ಷ ತನ್ನ ಗೆಲುವಿಗಾಗಿ ಈಗಾಗಲೇ ಕಸರತ್ತು ಆರಂಭಿಸಿದ್ದು, ಈ ನಿಟ್ಟಿನಲ್ಲಿ ನೂರೆಂಟು ಪ್ಲಾನ್ ರೂಪಿಸಿದೆ. ಹತ್ತಾರು ಲೆಕ್ಕಾಚಾರಗಳನ್ನೂ ಹಾಕುತ್ತಿದೆ.

ಅದರಲ್ಲೂ ವಿವಿಧ ಕ್ಷೇತ್ರಗಳಲ್ಲಿ ಸೂಕ್ತ ಕ್ಯಾಂಡಿಡೇಟ್‌ಗಳನ್ನು ಬಹಳ ಲೆಕ್ಕಾಚಾರ ಹಾಕಿ, ಅಳೆದು ತೂಗಿ ಫೈನಲ್ ಮಾಡಿದೆ. ಬಹುತೇಕ ಇದೇ ಚುನಾವಣೆಯ ಫಲಿತಾಂಶ ನಿರ್ಧರಿಸಲಿದೆ ಎಂದು ಹೇಳಲಾಗುತ್ತಿದೆ.

ರಾಜ್ಯದ ಹೈವೋಲ್ಟೇಜ್ ಕ್ಷೇತ್ರಗಳಲ್ಲೊಂದೆನಿಸಿರುವ ಕಲಬುರಗಿ (ಗುಲ್ಬರ್ಗಾ) ಕ್ಷೇತ್ರದಿಂದ ಅಂತಿಮವಾಗಿ ಕೈ ಪಕ್ಷದ ಅಧಿನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರಿಗೇ ಕಾಂಗ್ರೆಸ್ ಟಿಕೆಟ್ ನೀಡಲಾಗಿದೆ. ಈ ಬಾರಿಯ ಚುನಾವಣೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಸ್ಪರ್ಧೆ ಗ್ಯಾರಂಟಿ ಇಲ್ಲದಿರುವ ಹಿನ್ನೆಲೆಯಲ್ಲಿ ಅವರ ಅಳಿಯ ರಾಧಾಕೃಷ್ಣ ಅವರನ್ನೇ ಕಣಕ್ಕಿಳಿಸಲು ಕಾಂಗ್ರೆಸ್ ಹೈಕಮಾಂಡ್ ಚಿಂತನೆ ನಡೆಸಿದೆ ಎಂಬ ಮಾತು ಕೇಳಿ ಬಂದಿತ್ತು.

ಜ್ಯೂ. ಖರ್ಗೆ ಎಂದೇ ಕರೆಸಿಕೊಳ್ಳುವ ಮಲ್ಲಿಕಾರ್ಜುನ ಖರ್ಗೆ ಅವರ ಪುತ್ರ ಪ್ರಿಯಾಂಕ್ ಖರ್ಗೆ ಅವರು ಪ್ರಸ್ತುತ ಸಿಎಂ ಸಿದ್ದರಾಮಯ್ಯ ಸರ್ಕಾರದಲ್ಲಿ ಯಂಗ್ ಆಂಡ್ ???ಕ್ಟೀವ್ ಸಚಿವ ಎಂಬ ಹೆಗ್ಗಳಿಕೆಗೆ ಪಾತ್ರರಾಗುವುದರೊಂದಿಗೆ ತಮ್ಮ ಸರ್ಕಾರದ ಕುರಿತು ವಿರೋಧ ಪಕ್ಷಗಳ ಟೀಕೆಗಳಿಗೆ ಸಮರ್ಥ ಉತ್ತರ ನೀಡುತ್ತಿದ್ದಾರೆ. ಅಲ್ಲದೇ ಅವರು ರಾಷ್ಟ್ರ ರಾಜಕಾರಣದತ್ತ ಒಲವು ಹೊಂದಿಲ್ಲ. ಹೀಗಾಗಿ ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ಅವರೇ ಅಂತಿಮವಾಗಿ ಆಯ್ಕೆಯಾಗುವ ಸಾಧ್ಯತೆ ದಟ್ಟವಾಗಿತ್ತು. ಈಗ ಅದು ನಿಜವಾಗಿದೆ.

ಗುಲಬರ್ಗಾ ಕೇತ್ರದಿಂದ ಖರ್ಗೆ ಸೂಚಿಸುವ ಕ್ಯಾಂಡಿಡೇಟ್‌ಗೆ ಟಿಕೆಟ್ ನೀಡಲಾಗುತ್ತದೆ. ಚುನಾವಣೆಯಲ್ಲಿ ರಾಧಾಕೃಷ್ಣ ದೊಡ್ಡಮನಿ ಸ್ಪರ್ಧಿಸಬೇಕೆ ಅಥವಾ ಬೇಡವೇ ಎಂಬುದರ ಕುರಿತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರೇ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ. ಇದು ಖರ್ಗೆ ಅವರ ತವರು ಕ್ಷೇತ್ರವಾಗಿರುವುದರಿಂದ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರು ಸ್ಪರ್ಧಿಸಬೇಕೇ ಅಥವಾ ಬೇಡವೇ ಎಂಬ ಬಗ್ಗೆ ಖರ್ಗೆ ಅವರೇ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ಹೇಳಲಾಗುತ್ತಿತ್ತು.

ಆರಂಭದಲ್ಲಿ ಕಣಕ್ಕೆ ಇಳಿಯಲು ಹಿಂದೇಟು ಹಾಕಿದ್ದ ರಾಧಾಕೃಷ್ಣ ದೊಡ್ಡಮನಿ ಅವರನ್ನು ಕಣಕ್ಕಿಳಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ. ಒಂದೊಮ್ಮೆ ಹೈಕಮಾಂಡ್ ಖರ್ಗೆ ಅವರ ಅಳಿಯ ರಾಧಾಕೃಷ್ಣ ಅವರನ್ನೇ ಕಣಕ್ಕಿಳಿಸಿದರೆ ಅವರನ್ನು ಗೆಲ್ಲಿಸಿಕೊಂಡು ಬರಬೇಕು ಎಂದು ಸಂದೇಶ ರವಾನಿಸಲಾಗಿದೆ ಎಂದೂ ಹೇಳಲಾಗುತ್ತಿತ್ತು.

ಇದಕ್ಕೆ ರಾಜ್ಯದ ಕಾಂಗ್ರೆಸ್ ನಾಯಕರು "ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದು, ಗ್ಯಾರಂಟಿ ಯೋಜನೆಗಳು ಜನರ ಮನಮನೆಗಳನ್ನು ತಲುಪಿರುವುದರಿಂದ ರಾಧಾಕೃಷ್ಣ ಅವರನ್ನು ಗೆಲ್ಲಿಸಿಕೊಂಡು ಬರುವುದು ಅಸಾಧ್ಯವೇನಲ್ಲ" ಎಂದು ಹೈಕಮಾಂಡ್‌ಗೆ ಅಭಯ ನೀಡಿದ್ದಾರೆ ಎಂದು ಹೇಳಲಾಗುತ್ತಿತ್ತು.

ಇದೆಲ್ಲಕ್ಕೂ ಪುಷ್ಠಿ ನೀಡುವಂತೆ ಇದೀಗ ಕಲಬುರಗಿ (ಗುಲ್ಬರ್ಗಾ) ಕ್ಷೇತ್ರದಿಂದ ಅಂತಿಮವಾಗಿ ಕೈ ಪಕ್ಷದ ಅಧಿನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರಿಗೇ ಕಾಂಗ್ರೆಸ್ ಟಿಕೆಟ್ ನೀಡಲಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದು, ಗ್ಯಾರಂಟಿ ಯೋಜನೆಗಳು ಜನರ ಮನಮನೆಗಳನ್ನು ತಲುಪಿರುವುದರಿಂದ ಇದೆಲ್ಲದಕ್ಕಿಂತ ಇವರ ಬೆನ್ನಹಿಂದಿನ ದೊಡ್ಡ ಶಕ್ತಿಯಾಗಿ ಖರ್ಗೆ ನಿಂತಿರುವುದರಿಂದ ರಾಧಾಕೃಷ್ಣ ಅವರ ಗೆಲುವು ಅಸಾಧ್ಯವೇನಲ್ಲ ಎಂದು ವಿಶ್ಲೇಷಿಸಲಾಗುತ್ತಿದೆ.

ಇನ್ನು ರಾಧಾಕೃಷ್ಣ ದೊಡ್ಡಮನಿ ಅವರು ಮಲ್ಲಿಕಾರ್ಜುನ ಖರ್ಗೆಯವರ ಸತತ ಚುನಾವಣಾ ಪ್ರಚಾರವನ್ನು ನಿರ್ವಹಿಸುವಲ್ಲಿ ಮತ್ತು ಕಾರ್ಯತಂತ್ರ ರೂಪಿಸುವಲ್ಲಿ ಯಾವಾಗಲೂ ತೆರೆಮರೆಯಲ್ಲಿ ಸಕ್ರಿಯವಾಗಿ ಅಚ್ಚಳಿಯದಂತಹ ಕೆಲಸ ಕಾರ್ಯಗಳನ್ನು ಮಾಡಿದ್ದಾರೆ. 1972 ಮತ್ತು 2004 ರ ನಡುವೆ ಖರ್ಗೆ ಅವರು ಸತತವಾಗಿ ಪ್ರತಿನಿಧಿಸುತ್ತಿದ್ದ ಗುರ್ಮಿಟ್ಕಲ್ ವಿಧಾನಸಭಾ ಕ್ಷೇತ್ರದಲ್ಲಿ ಅವರು ಪಕ್ಷದ ಕಾರ್ಯಕರ್ತರು ಮತ್ತು ಬೆಂಬಲಿಗರಲ್ಲಿ ಜನಪ್ರಿಯರಾಗಿದ್ದಾರೆ. ಈ ಭಾಗದಲ್ಲಿ ಅವರು ತಮ್ಮದೇ ಆದ ಛಾರ್ಮ್ ಹೊಂದಿದ್ದಾರೆ.

ಕಡಿಮೆ ಮಾತು ಹಾಗೂ ಹೆಚ್ಚು ಕೆಲಸ ಎಂಬ ಮಾತಿನಲ್ಲಿ ನಂಬಿಕೆ ಇಟ್ಟುಕೊಂಡಿರುವ ತಮ್ಮ ಕೆಲಸಗಳ ಮೂಲಕವೇ ಬಹುಜನರ ಪ್ರೀತ್ಯಾಭಿಮಾನಕ್ಕೆ ಪಾತ್ರರಾಗಿರುವ ಆದರೆ ಸಾರ್ವಜನಿಕವಾಗಿ ಅಷ್ಟಾಗಿ ಕಾಣಿಕೊಳ್ಳದ, ಪ್ರಚಾರದ ತೇವಲಿಗೆ ಬೀಳದೇ ಕಾಯಕವೇ ಕೈಲಾಸ ಎಂಬ ಮಾತನ್ನು ನಂಬಿ ಅಪ್ಪಟ ಕಾಯಕಜೀವಿಯಾಗಿರುವ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರು ಸದ್ಯ ಪೀಪಲ್ಸ್ ಎಜುಕೇಶನ್ ಸೊಸೈಟಿಯ ಮುಖ್ಯಸ್ಥರಾಗಿದ್ದು, ಬೆಂಗಳೂರು ಹಾಗೂ ಕಲಬುರ್ಗಿಯಲ್ಲಿರುವ ಅಂಬೇಡ್ಕರ್ ಶಿಕ್ಷಣ ಸಂಸ್ಥೆಗಳ ಉಸ್ತುವಾರಿ ವಹಿಸಿಕೊಂಡು ಶಿಕ್ಷಣ ಕ್ಷೇತ್ರದಲ್ಲಿ ತಮ್ಮ ಛಾಪು ಮೂಡಿಸಿದ್ದಾರೆ. ಶಿಕ್ಷಣ ಸಂಸ್ಥೆಗಳನ್ನೂ ನಿರ್ವಹಿಸುತ್ತಿರುವ ಉದ್ಯಮಿ ರಾಧಾಕೃಷ್ಣ ದೊಡ್ಡಮನಿ ಕಲಬುರಗಿ ಕ್ಷೇತ್ರದ ಸಂಭಾವ್ಯ ಅಭ್ಯರ್ಥಿಗಳಲ್ಲಿ ಮುಂಚೂಣಿಯಲ್ಲಿದ್ದರು.

ರಾಜ್ಯ ಹಾಗೂ ರಾಷ್ಟ್ರ ರಾಜಕಾರಣದಲ್ಲಿ ತಮ್ಮದೇ ಆದ ವಿಶಿಷ್ಟ ಹಾಗೂ ಅಚ್ಚಳಿಯದಂತಹ ಛಾಪು ಮೂಡಿಸಿ, ತಬ್ಬಲಿ ಸಮುದಾಯದ ಹೆಬ್ಬುಲಿಯಂತಿರುವ ಮಹಾನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರು ಈ ಬಾರಿಯ ಚುನಾವಣೆಯಲ್ಲಿ ಗೆದ್ದು, ಅಲ್ಲಿಂದ ಮುಂದೆಯೂ ಗೆಲ್ಲುತ್ತಲೇ ಹೋಗಿ, ಸೋಲಿಲ್ಲದ ಸರದಾರನಾಗಿ, ತಮ್ಮ ಮಾವನ ಹಾದಿಯಲ್ಲೇ ಸಾಗಿ, ಜನಾನುರಾಗಿ ವ್ಯಕ್ತಿತ್ವದಿಂದ ಜನಮೆಚ್ಚುಗೆ ಗಳಿಸಿ, ಮಾವನಿಗೆ ತಕ್ಕ ಅಳಿಯ ಎಂದು ಅನ್ನಿಸಿಕೊಳ್ಳುತ್ತಾರಾ..

ರಾಜ್ಯದಲ್ಲಿ ಸದ್ಯ ಕಾಂಗ್ರೆಸ್ ಅಧಿಕಾರದಲ್ಲಿದ್ದು, ಗ್ಯಾರಂಟಿ ಯೋಜನೆಗಳು ಜನರ ಮನಮನೆಗಳನ್ನು ತಲುಪಿರುವುದರಿಂದ, ಇದೆಲ್ಲದಕ್ಕಿಂತ ಇವರ ಬೆನ್ನಹಿಂದಿನ ದೊಡ್ಡ ಶಕ್ತಿಯಾಗಿ ಇವರ ಮಾವ ಖರ್ಗೆ ನಿಂತಿರುವುದರಿಂದ, ಮಾತ್ರವಲ್ಲದೇ ತಮ್ಮ ಸರಳ, ಸಜ್ಜನಿಕೆಯ ವ್ಯಕ್ತಿತ್ವದಿಂದ ಜನಾನುರಾಗಿಯಾಗಿಯೂ ಜನಮನ ಗೆದ್ದಿರುವ ರಾಧಾಕೃಷ್ಣ ದೊಡ್ಡಮನಿ ಅವರ ಗೆಲುವು ಅಸಾಧ್ಯವೇನಲ್ಲ ಎಂಬುದು ರಾಜಕೀಯ ಪಂಡಿತರ ಲೆಕ್ಕಚಾರವಾಗಿದೆ. ಕಾದು ನೋಡೋಣ..

-ಮಂಜುನಾಥ.ಎಸ್.ಕಟ್ಟಿಮನಿ

ಮಾರ್ಚ್ 31 ಭಾನುವಾರ ಬ್ಯಾಂಕ್‌ಗೆ ರಜೆ ಇಲ್ಲ

ನವದೆಹಲಿ (ವಾ.): ದೇಶಾದ್ಯಂತ ವಾರ್ಷಿಕ ಲೆಕ್ಕಪತ್ರಗಳ ಕ್ಲೋಸಿಂಗ್ ದಿನವಾಗಿರುವ ಕಾರಣಕ್ಕೆ ಮಾರ್ಚ್ 31ರ ಭಾನುವಾರದಂದು ದೇಶದ ಎಲ್ಲಾ ಬ್ಯಾಂಕ್‌ಗಳು ಸಾರ್ವಜನಿಕರಿಗೆ ಮುಕ್ತವಾಗಿರಲಿದೆ ಎಂದು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಬುಧವಾರ ಪ್ರಕಟಣೆಯಲ್ಲಿ ತಿಳಿಸಿದೆ. ಏಜೆನ್ಸಿ ಬ್ಯಾಂಕ್‌ಗಳು ಮಾರ್ಚ್ 31 ರಂದು ಸರ್ಕಾರಿ ವ್ಯವಹಾರಗಳನ್ನು ತೆರೆದಿಡಬೇಕು ಎಂದು ಆರ್‌ಬಿಐ ಪ್ರಕಟಣೆಯಲ್ಲಿ ಹೇಳಿದೆ.ಕೇಂದ್ರ ಸರ್ಕಾರ ಈ ಕುರಿತಾಗಿ ಆರ್‌ಬಿಐಗೆ ಮನವಿ ಮಾಡಿದ್ದು, ಸರ್ಕಾರಿ ವ್ಯವಹಾರಗಳನ್ನು ಹೊಂದಿರುವ ದೇಶದ ಎಲ್ಲಾ ಬ್ಯಾಂಕ್‌ಗಳು ಮಾರ್ಚ್ 31ರ ಭಾನುವಾರದಂದು ತೆರೆದಿರಬೇಕು ಎಂದು ಹೇಳಿದೆ.

ಆ ಮೂಲಕ 2023-24ರ ಹಣಕಾಸು ವರ್ಷಕ್ಕೆ ಸಂಬಂಧಿಸಿದ ಸರ್ಕಾರಿ ವ್ಯವಹಾರಗಳನ್ನು ಮುಗಿಸುವ ಇರಾದೆ ಹೊಂದಿದೆ. ಇದರಿಂದಾಗಿ ಸರ್ಕಾರಿ ವ್ಯವಹಾರಗಳನ್ನು ಹೊಂದಿರುವ ಎಲ್ಲಾ ಏಜೆನ್ಸಿ ಬ್ಯಾಂಕ್‌ಗಳು ಹಣಕಾಸು ವರ್ಷದ ಕೊನೆ ದಿನ ತೆರೆದಿರಲಿದೆ ಎಂದು ಆರ್‌ಬಿಐ ತಿಳಿಸಿದೆ.

ಕುಡಿದು ವಿಮಾನ ಹಾರಿಸಿದ ಕುಡುಕ ಪೈಲಟ್‌ಗೆ 10 ತಿಂಗಳು ಜೈಲು

ವಾಷಿಂಗ್ಟನ್,ಮಾ.- ಕಂಠಮಟ್ಟ ಕುಡಿದು ವಿಮಾನ ಚಲಾಯಿಸಲು ಪ್ರಯತ್ನಿಸಿದ್ದ ಪೈಲಟ್ಗೆ 10 ತಿಂಗಳ ಜೈಲು ಶಿಕ್ಷೆ ವಿಧಿಸಲಾಗಿದೆ. ಸ್ಕಾಟ್ಲೆಂಡ್ನಿಂದ ಅಮೆರಿಕಕ್ಕೆ ಡೆಲ್ಟಾ ಏರ್ಲೈನ್ಸ್ ವಿಮಾನವನ್ನು ಹಾರಿಸಲು ಯತ್ನಿಸಿದ ಪಾನಮತ್ತ ಪೈಲಟ್ ಕ್ಯಾಪ್ಟನ್ ಲಾರೆನ್ಸ್ ರಸೆಲ್ಗೆ ಜೈಲು ಶಿಕ್ಷೆ ವಿಧಿಸಲಾಗಿದೆ ಎಂದು ಗಾರ್ಡಿಯನ್ ಪತ್ರಿಕೆ ವರದಿ ಮಾಡಿದೆ.

ಅವರು ಎಡಿನ್ಬರ್ಗ್ನಿಂದ ನ್ಯೂಯಾರ್ಕ್ಗೆ ಬೋಯಿಂಗ್ 767 ವಿಮಾನವನ್ನು ಪೈಲಟ್ ಮಾಡಬೇಕಾಗಿದ್ದ ದಿನದಂದು ಆಲ್ಕೋಹಾಲ್ ರಕ್ತದ ಮಿತಿಗಿಂತ ಸುಮಾರು ಎರಡೂವರೆ ಪಟ್ಟು ಹೆಚ್ಚು ಕಂಡು ಬಂದಿತ್ತು ಎನ್ನಲಾಗಿದೆ. ಕಳೆದ ವರ್ಷ ಜೂನ್ 16 ರಂದು ರಸೆಲ್ ತನ್ನ ಪೈಲಟ್ ಸಮವಸ್ತ್ರವನ್ನು ಆಧರಿಸಿ ನಿರ್ಗಮಿಸುವ 80 ನಿಮಿಷಗಳ ಮೊದಲು ಬ್ಯಾಗೇಜ್ ನಿಯಂತ್ರಣಕ್ಕೆ ಬಂದಾಗ ಈ ಘಟನೆ ಸಂಭವಿಸಿದೆ.

ಆದಾಗ್ಯೂ, ಅವನ ಕ್ಯಾರಿ-ಆನ್ ಸಾಮಾನುಗಳನ್ನು ಎಕ್ಸ್ -ರೇ ಸ್ಕ್ಯಾನರ್ನಿಂದ ಪರಿಶೀಲಿಸಿದಾಗ ಜಾಗರ್ಮಿಸ್ಟರ್ನ ಎರಡು ಬಾಟಲಿಗಳು ಇರುವುದು ಕಂಡುಬಂದಿತ್ತು.ನಂತರ ಅವರು ಉಸಿರಾಟದ ಪರೀಕ್ಷೆಯಲ್ಲಿ ವಿಫಲರಾದರು ಮತ್ತು ಅವರ ರಕ್ತದ ಮಾದರಿಯು 100 ಮಿಲಿಲೀಟರ್ ರಕ್ತದಲ್ಲಿ 49 ಮಿಲಿಗ್ರಾಂ ಆಲ್ಕೋಹಾಲ್ ಕಂಡುಬಂದಿತ್ತು.

ಧ್ವನಿವರ್ಧಕಗಳ ಮೇಲೆ ನಿರ್ಬಂಧ ವಿಧಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಆದೇಶ

ಬಳ್ಳಾರಿ,ಮಾ.19.ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಜಿಲ್ಲೆಯಾದ್ಯಂತ ಕಟ್ಟುನಿಟ್ಟಿನ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಿಲ್ಲೆಯಲ್ಲಿ ಧ್ವನಿ ವರ್ಧಕಗಳು, ಸಾರ್ವಜನಕ ಸ್ಥಳಗಳಲ್ಲಿ ಪಟಾಕಿ ಸಿಡಿಸುವುದು ಮತ್ತು ಸಂಗೀತ ವಾದ್ಯಗಳ ಧ್ವನಿವರ್ಧಕಗಳನ್ನು ಬಳಸುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯಾದ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಲೌಡ್ ಸ್ಪೀಕರ್‌ಗಳು, ಧ್ವನಿ ವರ್ಧಕಗಳನ್ನು ಬಳಸಲು ಆಯಾ ವ್ಯಾಪ್ತಿಯ ನಿಗದಿಪಡಿಸಿದ ಪ್ರಾಧಿಕಾರದಿಂದ ಲಿಖಿತ ಅನುಮತಿಯನ್ನು ಪಡೆಯಬೇಕು. ಯಾವುದೇ ಪರವಾನಗಿ ಇಲ್ಲದೇ ಧ್ವನಿವರ್ಧಕಗಳನ್ನು ಬಳಸಿದಲ್ಲಿ ಅಂತಹ ವಾಹನ ಮತ್ತು ಉಪಕರಣಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ. ಪರವಾನಗೆ ಇಲ್ಲದೇ ಅಳವಡಿಸಲಾಗಿರುವ ಧ್ವನಿವರ್ಧಕಗಳನ್ನು ಸ್ವಯಂಪ್ರೇರಣೆಯಿಂದ ಹಿಂಪಡೆಯಬೇಕು. ಧ್ವನಿವರ್ಧಕಗಳನ್ನು ರಾತ್ರಿ 10 ಗಂಟೆಯಿಂದ ಬೆಳಿಗ್ಗೆ 06 ಗಂಟೆಯೊಳಗಿನ ಅವಧಿಯಲ್ಲಿ ಬಳಸುವಂತಿಲ್ಲ ಎಂದು ಅವರು ತಿಳಿಸಿದ್ದಾರೆ. ಯಾವುದೇ ಧ್ವನಿವರ್ಧಕ ಬಳಸುವ ವಾಹನ ಮತ್ತು ಯಾವುದೇ ಪ್ರದೇಶದಲ್ಲಿ ಪಟಾಕಿ ಸಿಡಿಸುವ ಉದ್ದೇಶವಿದ್ದಲ್ಲಿ ಅನುಮತಿ ಕಡ್ಡಾಯವಾಗಿದೆ. ಈ ಬಗ್ಗೆ ಸ್ಥಳೀಯ, ಆಯಾ ವ್ಯಾಪ್ತಿ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಕ್ಷೇತ್ರ ಚುನಾವಣಾಧಿಕಾರಿಗಳಿಗೆ ಪರವಾನಿಗೆಯನ್ನು ಪ್ರದರ್ಶಿಸಬೇಕಾಗುತ್ತದೆ.

ಎಲ್ಲಾ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಮತ್ತು ವಾಹನಗಳು, ಸರಕು ವಾಹನಗಳು, ಆಟೋಗಳು ಧ್ವನಿವರ್ಧಕಗಳನ್ನು ಬಳಸುವಾಗ ಇದನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಪರವಾನಗೆ ಪಡೆಯುವ ವೇಳೆ ಸಂಬಂಧಿಸಿದವರ ಗುರುತಿನ ಪತ್ರ ಮತ್ತು ವಾಹನಗಳ ದಾಖಲೆಗಳ ಪತ್ರಗಳನ್ನು ಸಲ್ಲಿಸಬೇಕು ಮತ್ತು ಎಲ್ಲಾ ವಿಧವಾದ ಧ್ವನಿ ವರ್ಧಕಗಳ ಬಳಕೆಯ ಅವಧಿಯು ಮತದಾನ ಮುಕ್ತಾಯಕ್ಕೆ 48 ಗಂಟೆಗಳ ಮೊದಲು ಕೊನೆಗೊಳ್ಳಲಿದೆ.

ಈ ಆದೇಶವನ್ನು ಉಲ್ಲಂಘನೆ ಮಾಡಿದಲ್ಲಿ ಐಪಿಸಿ ಸೆಕ್ಷನ್ 188 ಅಡಿಯಲ್ಲಿ ಅಪರಾಧ ಎಂದು ಪರಿಗಣಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. ಈ ಆದೇಶವು ಇಡೀ ಬಳ್ಳಾರಿ ಜಿಲ್ಲೆಯಾದ್ಯಂತ ಅನ್ವಯಿಸಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಚುನಾವಣಾ ಕರಪತ್ರ, ಪೋಸ್ಟರ್ ಮುದ್ರಣ ಮೇಲೆ ನಿರ್ಬಂಧ ವಿಧಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಆದೇಶ

ಬಳ್ಳಾರಿ,ಮಾ.-:ಲೋಕಸಭೆ ಸಾರ್ವತ್ರಿಕ ಚುನಾವಣೆ ಸಂಬಂಧ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿರುವ ಹಿನ್ನಲೆಯಲ್ಲಿ ಚುನಾವಣಾ ಕರಪತ್ರಗಳು ಮತ್ತು ಪೋಸ್ಟರ್‌ಗಳ ಮುದ್ರಣ ಮತ್ತು ಪ್ರಕಟಣೆಯ ಮೇಲೆ ಅಪಪ್ರಚಾರ ಕುರಿತಂತೆ ಸುಳ್ಳು ಮಾಹಿತಿಯನ್ನು ಮುದ್ರಿಸದಂತೆ ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ನಿರ್ಬಂಧಿಸಿ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಲ್ಲಿ ಯಾವುದೇ ರೀತಿಯ ರಾಜಕೀಯ ಮತಪ್ರಚಾರ ಮತ್ತು ಕೋಮುಗಲಭೆ ಸೃಷ್ಟಿಸುವಂತಹ, ದ್ವೇಷ ಭಾವನೆಗಳನ್ನು ಕೆರಳಿಸುವಂತಹ ಬ್ಯಾನರ್‌ಗಳಾಗಲೀ, ಹೋರ್ಡಿಂಗ್ಸ್‌ಗಳಾಗಲೀ ಮತ್ತು ಕರಪತ್ರಗಳನ್ನಾಗಲೀ ಮುದ್ರಿಸುವಂತಿಲ್ಲ. ಮುದ್ರಿಸಲಾದ ಅಥವಾ ಬಹು-ಗ್ರಾಫ್ ಮಾಡಲಾದ ಪ್ರತಿಯೊಂದು ಚುನಾವಣಾ ಕರಪತ್ರ, ಫಲಕ, ಭಿತ್ತಿಪತ್ರ ಅಥವಾ ಪೋಸ್ಟರ್ ಮುಂಭಾಗದಲ್ಲಿ ಮುದ್ರಕನ ಹೆಸರು ಮತ್ತು ವಿಳಾಸ ಮತ್ತು ಪ್ರಕಾಶಕರ ಹೆಸರು, ವಿಳಾಸವನ್ನು ಕಡ್ಡಾಯವಾಗಿ ಹೊಂದಿರಬೇಕು. ಅಂತಹ ಯಾವುದೇ ಡಾಕ್ಯುಮೆಂಟ್‌ನ ಮುದ್ರಣವು ಉದ್ದೇಶಿತ ಪ್ರಕಾಶಕರಿಂದ ಸಹಿ ಮಾಡಲ್ಪಟ್ಟ ಮತ್ತು ಅವನು ವೈಯಕ್ತಿಕವಾಗಿ ತಿಳಿದಿರುವ ಇಬ್ಬರು ವ್ಯಕ್ತಿಗಳಿಂದ ದೃಢೀಕರಿಸಲ್ಪಟ್ಟ ಅವನ ಗುರುತಿನ ಘೋಷಣೆಯನ್ನು ದ್ವಿ ಪ್ರತಿಯಲ್ಲಿ (ನಕಲಿನಲ್ಲಿ) ಪಡೆಯಬೇಕು. ಮುದ್ರಣ ಘೋಷಣೆಯ ಒಂದು ಪ್ರತಿಯನ್ನು ಮತ್ತು ದಾಖಲೆಯ ಒಂದು ಪ್ರತಿಯನ್ನು ಮುದ್ರಿಸಿರುವ ಜಿಲ್ಲೆಯ ಜಿಲ್ಲಾ ಮ್ಯಾಜಿಸ್ಟ್ರೇ[]ಗೆ ಸಲ್ಲಿಸಬೇಕು ಎಂದು ಅವರು ತಿಳಿಸಿದ್ದಾರೆ.ಯಾವುದೇ ನಿಬಂಧನೆಗಳನ್ನು ಉಲ್ಲಂಘಿಸಿದರೆ ಐಪಿಸಿ ಸೆಕ್ಷನ್ 188 ಅಡಿ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲಾಗುವುದು ಎಂದು ಡಿಸಿ ಪ್ರಶಾಂತ್ ಕುಮಾರ್ ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

ಹವಾಮಾನ ವೈಪರೀತ್ಯ ಹಲವೆಡೆ ಮಳೆ ನಿರೀಕ್ಷೆ

ನವದೆಹಲಿ,ಮಾ.-ಕೆಲ ದಿನಗಳಿಂದ, ದೇಶಾದ್ಯಂತ ಅನೇಕ ರಾಜ್ಯಗಳಲ್ಲಿ ಅನಿರೀಕ್ಷಿತವಾಗಿ ಹವಾಮಾನದ ಸ್ಥಿತಿಯಲ್ಲಿ ಬದಲಾವಣೆ ಆಗಿದೆ.

ಹವಾಮಾನ ಇಲಾಖೆಯ ಪ್ರಕಾರ, ಛತ್ತೀಸ್‌ಗಢ, ಜಾರ್ಖಂಡ್, ಒಡಿಶಾ ಮತ್ತು ಪಶ್ಚಿಮ ಬಂಗಾಳದಲ್ಲಿ ಚಂಡಮಾರುತದಿಂದಾಗಿ ಬಲವಾದ ಗಾಳಿ, ಆಲಿಕಲ್ಲು ಮತ್ತು ಗುಡುಗು ಸಂಭವಿಸುವ ಸಾಧ್ಯತೆಯಿದೆ. ಬಿಹಾರದ ಕೆಲವು ಪ್ರದೇಶಗಳಲ್ಲೂ ಇದರ ಪರಿಣಾಮವನ್ನು ಕಾಣಬಹುದು.

ವಿದರ್ಭ, ಛತ್ತೀಸ್‌ಗಢ, ಪಕ್ಕದ ಪೂರ್ವ ಮಧ್ಯಪ್ರದೇಶ ಮತ್ತು ಪೂರ್ವ ತೆಲಂಗಾಣ, ಆಂತರಿಕ ಒಡಿಶಾ, ಜಾರ್ಖಂಡ್‌ನಲ್ಲಿ ಗುಡುಗು, ಮಿಂಚು ಮತ್ತು ಬಲವಾದ ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಮಳೆಯಾಗಬಹುದು. ಆಂಧ್ರಪ್ರದೇಶದಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಐಎಂಡಿ ಒಡಿಶಾ, ಜಾರ್ಖಂಡ್ ಮತ್ತು ಪಶ್ಚಿಮ ಬಂಗಾಳದಲ್ಲಿ ಮಳೆ ಮತ್ತು ಆಲಿಕಲ್ಲು ಮುನ್ಸೂಚನೆ ನೀಡಿದೆ.

ಇಂದು ಉತ್ತರ ಪ್ರದೇಶ-ಬಿಹಾರದಿಂದ ದೆಹಲಿ ಎನ್‌ಸಿಆರ್‌ವರೆಗೆ ಹವಾಮಾನದಲ್ಲಿ ಯಾವುದೇ ಮಹತ್ವದ ಬದಲಾವಣೆಯಾಗಿಲ್ಲ. ಆದಾಗ್ಯೂ, ದೇಶದ ಪೂರ್ವ ರಾಜ್ಯಗಳಾದ ಛತ್ತೀಸ್‌ಗಢ ಮತ್ತು ಜಾರ್ಖಂಡ್‌ನಲ್ಲಿ ಇಂದು ಇಂದು ಹವಾಮಾನದಲ್ಲಿ ಏರುಪೇರು ಆಗಬಹುದು.

ಮುಂದಿನ ಎರಡು ದಿನಗಳಲ್ಲಿ ಮಧ್ಯ ಭಾರತ ಮತ್ತು ಪೂರ್ವ ಭಾರತದಲ್ಲಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದೆಹಲಿಯ ಹವಾಮಾನವು ಆಹ್ಲಾದಕರವಾಗಿರುತ್ತದೆ ಮತ್ತು ಉತ್ತಮ ಬಿಸಿಲು ಇರುತ್ತದೆ. ದೆಹಲಿಯಲ್ಲಿ ಇಂದು ಕೂಡ ತಾಪಮಾನ ಹೆಚ್ಚಾಗಬಹುದು.

ಮಾರ್ಚ್ 24 ಅಥವಾ 25 ರಂದು ಹೋಳಿ ದಿನದಂದು ದೆಹಲಿಯಲ್ಲಿ ತಾಪಮಾನವು 33 ಡಿಗ್ರಿ ತಲುಪುತ್ತದೆ. ಆದರೆ, ಇಂದಿನಿಂದ ಹೋಳಿವರೆಗೆ ದೆಹಲಿಯಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ. ಪೂರ್ವ ಮಧ್ಯಪ್ರದೇಶದಲ್ಲಿ ಮಳೆಯಾಗಬಹುದು ಆದರೆ ಅದು ಕ್ರಮೇಣ ಕೊನೆಗೊಳ್ಳುತ್ತದೆ ಮತ್ತು ಹೋಳಿ ನಂತರ ಸಾಕಷ್ಟು ಉಷ್ಣ ಇರುತ್ತದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಹವಾಮಾನ ತಜ್ಞರ ಪ್ರಕಾರ, ಹೋಳಿ ಸಮಯದಲ್ಲಿ, ಪಂಜಾಬ್, ಹರಿಯಾಣ, ದೆಹಲಿ, ರಾಜಸ್ಥಾನ ಮತ್ತು ಮಧ್ಯಪ್ರದೇಶ ಮತ್ತು ಉತ್ತರ ಪ್ರದೇಶದ ಹೆಚ್ಚಿನ ಭಾಗಗಳಲ್ಲಿ ಬಿಸಿಲಿನ ತೀವ್ರತೆ ಇರುತ್ತದೆ. ಆದಾಗ್ಯೂ, ಇಂದು ಅಂದರೆ ಮಾರ್ಚ್ 20 ರಂದು ಯುಪಿ-ಬಿಹಾರ ಮತ್ತು ದೆಹಲಿಯಲ್ಲಿ ಮಳೆಯಾಗುವ ಸಾಧ್ಯತೆಯಿಲ್ಲ.

ಛತ್ತೀಸ್‌ಗಢ, ಒಡಿಶಾ, ಜಾರ್ಖಂಡ್ ಮತ್ತು ಪಶ್ಚಿಮ ಬಂಗಾಳದಲ್ಲಿ ದೊಡ್ಡ ಪ್ರಮಾಣದ ಗುಡುಗು ಮತ್ತು ಚಂಡಮಾರುತದ ಅನುಭವವಾಗುವ ಸಾಧ್ಯತೆಯಿದೆ. ಇದರ ಚಟುವಟಿಕೆಯು ಮಾರ್ಚ್ 21 ರಂದು ಹಗುರವಾಗಬಹುದು, ಆದರೆ ಸ್ವಲ್ಪ ಪರಿಣಾಮ ಬೀರಬಹುದು.

ಚಂಡಮಾರುತದ ಪ್ರಭಾವವು ಆಂಧ್ರಪ್ರದೇಶದ ಉತ್ತರ ಕರಾವಳಿ ಮತ್ತು ಬಿಹಾರದ ಕೆಲವು ಭಾಗಗಳನ್ನು ಸಹ ಆವರಿಸಿದೆ. ಇದಲ್ಲದೆ, ಮಾರ್ಚ್ 20 ಮತ್ತು 23 ರ ನಡುವೆ ಪಶ್ಚಿಮ ಹಿಮಾಲಯ ಮತ್ತು ಈಶಾನ್ಯ ಭಾರತದಲ್ಲಿ ಹಗುರದಿಂದ ಸಾಧಾರಣ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಇದಲ್ಲದೆ, ಮಾರ್ಚ್ 19 ರಿಂದ 23 ರವರೆಗೆ, ವಾಯುವ್ಯ ಉತ್ತರ ಪ್ರದೇಶ, ಜಾರ್ಖಂಡ್ ಮತ್ತು ದಕ್ಷಿಣ ಅಸ್ಸಾಂನಲ್ಲಿ ಚಂಡಮಾರುತದ ಪರಿಚಲನೆ ಮತ್ತು ಬಂಗಾಳಕೊಲ್ಲಿಯಿಂದ ತೇವಾಂಶವುಳ್ಳ ಗಾಳಿಯಿಂದಾಗಿ ಮಳೆ ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕಾರನ್ನು ಹೆಲಿಕಾಪ್ಟರ್ ಆಗಿ ಪರಿವರ್ತಿಸಿದ ವಾಹನ ಸೀಜ್

ಲಖನೌ : ಭಾರತದಲ್ಲಿ ಜುಗಾಡ್ ಅನ್ನೋ ಪದ ಭಾರಿ ಜನಪ್ರಿಯ. ತಮ್ಮ ಪ್ರತಿಭೆಯಿಂದ ಲಭ್ಯವಿರುವ ವಸ್ತುಗಳಲ್ಲಿ ಊಹಿಸಲು ಸಾಧ್ಯವಾಗದ ಪರಿಹಾರ ಕಂಡುಕೊಳುವುದು ಇಲ್ಲಿ ಮಾತ್ರ. ಇದೀಗ ಸಹೋದರರಿಬ್ಬರು ಹಳೇ ಮಾರುತಿ ಸುಜುಕಿ ವ್ಯಾಗನ್‌ಆರ್ ಕಾರಿನನ್ನು ಹೆಲಿಕಾಪ್ಟರ್ ಆಗಿ ಪರಿವರ್ತಿಸಿ ತಮ್ಮ ಪ್ರತಿಭೆ ತೋರಿಸಿದ್ದಾರೆ. ವ್ಯಾಗನ್‌ಆರ್ ಕಾರಿನ ಮೇಲ್ಭಾಗದಲ್ಲಿ ಹೆಲಿಕಾಪ್ಟರ್ ರೆಕ್ಕೆಗಳನ್ನು ಅಳವಡಿಸಲಾಗಿದೆ. ಇನ್ನು ಹಿಂಬಾಗದಲ್ಲಿ ಹೆಲಿಕಾಪ್ಟರ್ ಟೈಲ್ ರೀತಿಯಲ್ಲೇ ಮಾಡಿಫಿಕೇಶನ್ ಮಾಡಲಾಗಿದೆ. ಇನ್ನು ರೆಕ್ಕಿ, ಟೈಲ್‌ನಲ್ಲಿನ ಸಣ್ಣ ರೆಕ್ಕಿ ಹಾಗೂ ಲೈಟಿಂಗ್ಸ್ ಕಾರ್ಯಗಳು ಮುಕ್ತಾಯಗೊಂಡು ಇನ್ನೇನು ಪೈಟಿಂಗ್ ಮಾಡಬೇಕು ಅನ್ನುವಷ್ಟರಲ್ಲೇ ಈ ಮಾರುತಿ ಹೆಲಿಕಾಪ್ಟರ್‌ನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಉತ್ತರ ಪ್ರದೇಶದ ಸಹೋದರರಿಬ್ಬರ ಈ ಹೆಲಿಕಾಪ್ಟರ್ ಇದೀಗ ಪೊಲೀಸರ್ ಠಾಣೆಲ್ಲಿದೆ.

ಅಂಬೇಡ್ಕರ್ ನಗರದ ಸಹೋದರರು ಹಳೇ ಮಾರುತಿ ವ್ಯಾಗ???ರ್ ಕಾರನ್ನು ಹೆಲಿಕಾಪ್ಟರ್ ಆಗಿ ಪರಿವರ್ತಿಸಿದ್ದಾರೆ. ಲಭ್ಯವಿರುವ ಸಲಕರಣೆ, ಮೆಟಲ್ ಶೀಟ್, ಇತರ ಮೆಟಲ್ ರಾಡ್‌ಗಳ ಬಳಸಿ ಮಾರುತಿ ವ್ಯಾಗ???ರ್ ಕಾರನ್ನು ಹೆಲಿಕಾಪ್ಟರ್ ರೀತಿ ಬದಲಾಯಿಸಿದ್ದರೆ. ಕಾರಿನ ಮೇಲೆ ಹೆಲಿಕಾಪ್ಟರ್ ರೆಕ್ಕೆಗಳನ್ನು ಅಳವಡಿಸಲಾಗಿದೆ. ರಸ್ತೆಯಲ್ಲಿ ತೆರಳಬೇಕಾದ ಕಾರಣ ರೆಕ್ಕೆಯ ಉದ್ದವನ್ನು ಕಡಿತಗೊಳಿಸಲಾಗಿದೆ. ಮೈದಾನದಲ್ಲಿ ಚಲಾಯಿಸುವುದಾದರೆ ದೊಡ್ಡ ರೆಕ್ಕೆಗಳನ್ನು ಅಳಡಿಸಲು ಎಲ್ಲಾ ವ್ಯವಸ್ಥೆ ಮಾಡಿಕೊಂಡಿದ್ದಾರೆ.

ಇನ್ನು ಕಾರಿನ ಹಿಂಭಾಗದ ಡಿಕ್ಕಿ ಡೋರ್ ತೆಗೆದು ಹೆಲಿಕಾಪ್ಟರ್ ರೀತಿ ಟೈಲ್ ಅಳವಡಿಸಿದ್ದಾರೆ. ಎಲ್ಲವನ್ನೂ ಅಚ್ಚುಕಟ್ಟಾಗಿ ಮಾಡಿದ್ದಾರೆ. ಈ ವೇಳೆ ಕಾರಿನ ಬ್ಯಾಲೆನ್ಸ್ ತಪ್ಪದಂತೆ ನೋಡಿಕೊಂಡಿದ್ದಾರೆ. ಹೆಚ್ಚುವರಿಯಾಗಿ ಸೇರಿಸಲಾಗಿರುವ ಹೆಲಿಕಾಪ್ಟರ್ ರೆಕ್ಕೆ ಹಾಗೂ ಬಾಲದಿಂದ ತೂಕದಲ್ಲೂ ಹೆಚ್ಚು ಕಡಿಮೆಯಾಗದಂತೆ ಸಮತೋಲನ ಕಾಪಾಡಿಕೊಳ್ಳಲಾಗಿದೆ.

ಎಲ್ಲಾ ಕೆಲಸ ಮುಗಿಸಿದ ಸಹೋದರರು, ಅಂಬೇಡ್ಕರ್‌ನಗರದಿಂದ ಅಕ್ಬರಪುರಕ್ಕೆ ಈ ಮಾಡಿಫೈಡ್ ಹೆಲಿಕಾಪ್ಟರನ್ನು ರಸ್ತೆ ಮೂಲಕ ಚಲಾಯಿಸಿಕೊಂಡು ಹೋಗಿದ್ದಾರೆ. ಅಕ್ಬರಪುರದಲ್ಲಿ ಕಾರಿಗೆ ಸಂಪೂರ್ಣ ಪೈಟಿಂಗ್ ಮಾಡಲು ಎಲ್ಲಾ ವ್ಯವಸ್ಥೆ ಮಾಡಲಾಗಿದೆ. ಆದರೆ ಅಕ್ಬರಪುರಕ್ಕೆ ತೆರಳುತ್ತಿದ್ದ ಮಾರ್ಗಮಧ್ಯೆ ಕೊತ್ವಾಲಿ ವಲಯದಲ್ಲಿ ಪೊಲೀಸರು ವಿಚಿತ್ರ ವಾಹನವನ್ನು ತಡೆದಿದ್ದಾರೆ.